☎ 0836 - 2224098, 2224195
2224301, 2222616
2224274, 2222505

# ಹುಬ್ಬಳ್ಳಿ – ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ

**ನವನಗರ, ಹುಬ್ಬಳ್ಳಿ – 580 025**

ಕ್ರ.ಸಂ.: ಹು.ಧಾ.ನ.ಪ್ರಾ : ಯೋ.ವಿ/ವಿನ್ಯಾಸ.45/2019-20 | 1005 ದಿನಾಂಕ : 19-08-2020

ಗೆ,

ಭೂ ದಾಖಲೆಗಳ ಸಹಾಯಕ ನಿರ್ದೇಶಕರು,

ಹುಬ್ಬಳ್ಳಿ

ಮಾನ್ಯರೇ,

ವಿಷಯ: **ಹುಬ್ಬಳ್ಳಿ** ತಾಲೂಕ **ಗಬ್ಬೂರ** ಗ್ರಾಮದ ರಿ.ಸ.ನಂ.**67/6** ಕ್ಷೇತ್ರ **04ಎಕರೆ-38ಗುಂಟೆ,** ರಿ.ಸ.ನಂ.**68/1** ಕ್ಷೇತ್ರ **03ಎಕರೆ-39ಗುಂಟೆ** ಹಾಗೂ ರಿ.ಸ.ನಂ.**68/2+4** ನೇದ್ದರ ಪೈಕಿ ಕ್ಷೇತ್ರ **15ಗುಂಟೆ** ಒಟ್ಟು ಕ್ಷೇತ್ರ **09ಎಕರೆ-12ಗುಂಟೆ** ವಿಸ್ತೀರ್ಣದ ಪ್ರದೇಶದಲ್ಲಿ **ವಸತಿ** ಉದ್ದೇಶಕ್ಕಾಗಿ **ತಾತ್ಕಾಲಿಕ ವಿನ್ಯಾಸ ಅನುಮೋದನೆ** ನೀಡುವ ಕುರಿತು.

ಉಲ್ಲೇಖ:-1) ಅರ್ಜಿದಾರರ ಮನವಿ ದಿನಾಂಕ:**12-11-2020.**

2) ಮಾನ್ಯ ಜಿಲ್ಲಾಧಿಕಾರಿಗಳು, ಧಾರವಾಡ ಇವರ ಪತ್ರ ಸಂ:**34387, 34389 ಹಾಗೂ 34391** ದಿ:**02-11-2019.**

3) ಪ್ರಾಧಿಕಾರದ ಸಭೆಯ ದಿನಾಂಕ:**21-03-2020**ರ ವಿಷಯ ಸಂ:**03(03)** ತೀರ್ಮಾನದಂತೆ.

4) ಶುಲ್ಕ ತುಂಬಿದ ಚಲನ ನಂ.**07262** ದಿ:**06-08-2020, 07-08-2020 ಮತ್ತು 11-08-2020**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, **ಹುಬ್ಬಳ್ಳಿ** ತಾಲೂಕ **ಗಬ್ಬೂರ** ಗ್ರಾಮದ ರಿ.ಸ.ನಂ.**67/6** ಕ್ಷೇತ್ರ **04ಎಕರೆ-38ಗುಂಟೆ,** ರಿ.ಸ.ನಂ.**68/1** ಕ್ಷೇತ್ರ **03ಎಕರೆ-39ಗುಂಟೆ** ಹಾಗೂ ರಿ.ಸ.ನಂ.**68/2+4** ನೇದ್ದರ ಪೈಕಿ ಕ್ಷೇತ್ರ **15ಗುಂಟೆ** ಒಟ್ಟು ಕ್ಷೇತ್ರ **09ಎಕರೆ-12ಗುಂಟೆ** ವಿಸ್ತೀರ್ಣದ ಜಮೀನಿನಲ್ಲಿ **ವಸತಿ** ಉದ್ದೇಶಕ್ಕಾಗಿ **ವಿನ್ಯಾಸ** ಅನುಮೋದನೆ ಅಂಗೀಕರಿಸುವಂತೆ ಅರ್ಜಿದಾರರು ಉಲ್ಲೇಖ(1)ರಲ್ಲಿ ಮನವಿ ಸಲ್ಲಿಸಿರುತ್ತಾರೆ. ಅರ್ಜಿದಾರರು ಸಲ್ಲಿಸಿರುವ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಉಲ್ಲೇಖ(2)ರನ್ವಯ ಮಾನ್ಯ ಜಿಲ್ಲಾಧಿಕಾರಿಗಳು, ಧಾರವಾಡ ರವರು ಸದರಿ ಜಮೀನನ್ನು **ವಸತಿ** ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿ, ಆದೇಶ ಹೊರಡಿಸಿರುತ್ತಾರೆ. ಉಲ್ಲೇಖ(3)ರ ಪ್ರಾಧಿಕಾರದ ಸಭೆಯಲ್ಲಿ ಸದರಿ ಜಮೀನಿಗೆ ನಿಯಮಾನುಸಾರ **ವಸತಿ** ಉದ್ದೇಶದ **ವಿನ್ಯಾಸ**ವನ್ನು ಅನುಮೋದಿಸಲು ತೀರ್ಮಾನಿಸಲಾಗಿದೆ. ಅರ್ಜಿದಾರರು ಸಲ್ಲಿಸಿರುವ ವಿನ್ಯಾಸ ನಕ್ಷೆಯು ಮಹಾಯೋಜನೆ ಪರಿಷ್ಕೃತ-IIನ್ನು ಗಮನದಲ್ಲಿಟ್ಟುಕೊಂಡು ಸಿದ್ಧಪಡಿಸಲಾಗಿದೆ. ಉಲ್ಲೇಖ(4)ರನ್ವಯ, ಅರ್ಜಿದಾರರು ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿರುತ್ತಾರೆ. ಆದ್ದರಿಂದ ಸದರಿ ಜಮೀನಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ತಿದ್ದುಪಡಿ ಕಾಯ್ದೆ ಪ್ರಕರಣ 17(2ಎ) ರನ್ವಯ ಪರಿಷ್ಕೃತ ಕರಡು (Provisional Approval) ವಿನ್ಯಾಸಕ್ಕೆ ಕೆಳಕಂಡ ಷರತ್ತುಗಳಿಗೆ ಅನುಗುಣವಾಗಿ ಕಾರ್ಯರೂಪಕ್ಕೆ ತರಲು ತಾಂತ್ರಿಕ ಅನುಮೋದನೆ ನೀಡಲಾಗಿದೆ.

1) ಸದರಿ ಮಂಜೂರಾತಿಯು ಈ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸ ಅಭಿವೃದ್ಧಿ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮತಿಯನ್ನು ನವೀಕರಿಸಿಕೊಳ್ಳಬೇಕು.
2) ಈ ಪ್ರದೇಶದಲ್ಲಿ ಹಾಲಿ ಇರತಕ್ಕ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಂಡು, ಮುಖ್ಯ ರಸ್ತೆಗಳ ಎರಡೂ ಕಡೆ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮ ಕೈಕೊಳ್ಳಬೇಕು.
3) ಅನುಮೋದಿತ ವಿನ್ಯಾಸ ನಕ್ಷೆಯಲ್ಲಿರುವಂತೆಯೇ ನಿವೇಶನ, ರಸ್ತೆ ನಿರ್ಮಾಣ, ಪಕ್ಕಾ ಗಟಾರು ನಿರ್ಮಾಣ, ವಿದ್ಯುತ್ತೀಕರಣ, ಕುಡಿಯುವ ನೀರು ಸರಬರಾಜು ವ್ಯವಸ್ಥೆ ಹಾಗೂ ಒಳಚರಂಡಿ ವ್ಯವಸ್ಥೆ ಪ್ರದೇಶಗಳನ್ನು ವಿನ್ಯಾಸ ಮಾಲಿಕರು ಅಭಿವೃದ್ಧಿ ಪಡಿಸತಕ್ಕದ್ದು ಹಾಗೂ ಈ ಅಭಿವೃದ್ಧಿ ಕಾಮಗಾರಿಗಳು ಸಮರ್ಪಕವಾಗಿ ಪೂರ್ಣಗೊಂಡ ಬಗ್ಗೆ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಇಲಾಖೆಗಳಿಂದ ಮುಕ್ತಾಯ ಪ್ರಮಾಣ ಪತ್ರ ಪಡೆಯತಕ್ಕದ್ದು ಹಾಗೂ ಈ ಸೌಕರ್ಯಗಳನ್ನು ಮಹಾನಗರ ಪಾಲಿಕೆಗೆ ಹಸ್ತಾಂತರಿಸತಕ್ಕದ್ದು. ಈ ಕಚೇರಿಯ ಪೂರ್ವಾನುಮತಿ ಇಲ್ಲದೇ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
4) ಅನುಮೋದಿತ ಕರಡು **ವಸತಿ** ವಿನ್ಯಾಸದಲ್ಲಿರುವ **ಉದ್ಯಾನವನ** ಮತ್ತು **ರಸ್ತೆಗಾಗಿ** ನಿಗಧಿಪಡಿಸಿರುವ ಜಾಗೆಗಳನ್ನು ಅಭಿವೃದ್ಧಿಪಡಿಸಿ, ಯಾವ ಪರಿಹಾರ ಕೋರದೆ ಪುಕ್ಕಟೆಯಾಗಿ ಪರಿತ್ಯಜನಾ ಪತ್ರದ ಮೂಲಕ **ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ** ಇವರ ಹೆಸರಿಗೆ ಹಾಗೂ ಸದರಿ ವಿನ್ಯಾಸದಲ್ಲಿ **ನಾಗರೀಕ ಸೌಲಭ್ಯಕ್ಕಾಗಿ** ಮೀಸಲಿಟ್ಟ ಜಾಗೆಯನ್ನು **ಆಯುಕ್ತರು, ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ** ಇವರ ಹೆಸರಿಗೆ ಯಾವುದೇ ಪರಿಹಾರ ಕೋರದೆ ಪುಕ್ಕಟೆಯಾಗಿ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸಿಕೊಡತಕ್ಕದ್ದು.
5) ವಿನ್ಯಾಸ ಪ್ರದೇಶವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವವರೆಗೆ ಕಟ್ಟಡ ನಿರ್ಮಾಣ ಮಾಡಬಾರದು.
6) ವಿನ್ಯಾಸದಲ್ಲಿ ಹಾಯ್ದು ಹೋಗುವ ವಿದ್ಯುತ್ ವಾಹಕಗಳನ್ನು ಹಾಗೂ ದೂರವಾಣಿ ತಂತಿಗಳನ್ನು ರಸ್ತೆ ಪಕ್ಕಕ್ಕೆ ಸ್ಥಳಾಂತರಿಸತಕ್ಕದ್ದು.
7) ಅಭಿವೃದ್ಧಿ ಕಾಮಗಾರಿಗಳು ಮುಗಿದ ನಂತರ ಸಂಬಂಧಪಟ್ಟ ಇಲಾಖೆ/ಕಚೇರಿಗಳಿಂದ ಮುಕ್ತಾಯ ಪ್ರಮಾಣ ಪತ್ರ ಪಡೆದು ಪ್ರಾಧಿಕಾರಕ್ಕೆ ಹಾಜರಪಡಿಸತಕ್ಕದ್ದು.

8) ನಿಗದಿತ ಎರಡು ವರ್ಷಗಳ ಅವಧಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಮುಕ್ತಾಯ ಪ್ರಮಾಣ ಪತ್ರ ಪಡೆಯದೇ ಇದ್ದಲ್ಲಿ, ನಿವೇಶನಗಳನ್ನು ಪ್ರಾಧಿಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

9) ಸದರಿ ವಿನ್ಯಾಸಕ್ಕೆ ಸರ್ಕಾರದಿಂದ ಕಾಲಕಾಲಕ್ಕೆ ಬರುವ ಸುತ್ತೋಲೆ/ಅಧಿಸೂಚನೆಯ ನಿಯಮಾವಳಿಗಳನ್ನು ಪಾಲಿಸತಕ್ಕದ್ದು.

10) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ತಿದ್ದುಪಡಿ ಕಾಯ್ದೆ ಪ್ರಕರಣ 17(2ಎ) ರನ್ವಯ ಕರಡು ಅನುಮೋದನೆ ನೀಡಲಾಗಿದೆ. ವಿನ್ಯಾಸದ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಯನ್ನು ಪೂರ್ಣಗೊಳಿಸಿ ಮುಕ್ತಾಯ ಪ್ರಮಾಣ ಪತ್ರ ಪಡೆದ ನಂತರ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಲಾಗುವುದು. ಅಂತಿಮ ಅನುಮೋದನೆ ಪಡೆಯದೆ ವಿನ್ಯಾಸದಲ್ಲಿನ ನಿವೇಶನಗಳನ್ನು ಪರಭಾರ ಮಾಡತಕ್ಕದ್ದಲ್ಲ.

11) ಸದರಿ ಕರಡು ಅನುಮೋದಿತ ವಿನ್ಯಾಸಕ್ಕೆ **ಸಹಾಯಕ ನಿರ್ದೇಶಕರು, ಭೂ-ದಾಖಲೆ, ಹುಬ್ಬಳ್ಳಿ** ಇವರಿಂದ ಕೆ.ಜೆ.ಪಿ. ನಕ್ಷೆಯನ್ನು ತಯಾರಿಸಿ, ಪ್ರಾಧಿಕಾರಕ್ಕೆ ಪ್ರತಿಯನ್ನು ಹಾಜರು ಪಡಿಸುವುದು.

12) ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಯು ತಪ್ಪಾಗಿದ್ದಲ್ಲಿ, ವಿನ್ಯಾಸಕ್ಕೆ ನೀಡಿರುವ ಅಂಗೀಕಾರ ತಾನಾಗಿ ರದ್ದುಗೊಳ್ಳುತ್ತದೆ.

13) ವಿನ್ಯಾಸದ ಮಾಲೀಕರು ಕರ್ನಾಟಕ ರಿಯಲ್ ಎಸ್ಟೇಟ್(ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಗಳು 2017ರನ್ವಯ ನೋಂದಾಯಿಸಿಕೊಳ್ಳತಕ್ಕದ್ದು.

ತಮ್ಮ ವಿಶ್ವಾಸಿ

ಆಯುಕ್ತರು
ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ
ಹುಬ್ಬಳ್ಳಿ

ಪ್ರತಿಯನ್ನು:

1) **ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ಹುಬ್ಬಳ್ಳಿ** ಇವರಿಗೆ ವಿನ್ಯಾಸದಲ್ಲಿಯ ನಿವೇಶನಗಳ ಗಡಿಗಳನ್ನು ಗುರುತಿಸಿ, ಕೆ.ಜೆ.ಪಿ. ಶೀಟನ್ನು ತಯಾರಿಸಿ ಪ್ರಾಧಿಕಾರಕ್ಕೆ ಒಂದು ಪ್ರತಿಯನ್ನು ಸಲ್ಲಿಸಲು ಈ ಮೂಲಕ ಕಳುಹಿಸಲಾಗಿದೆ.

2) **ಹಿರಿಯ ಉಪನೋಂದಣಾಧಿಕಾರಿಗಳು, ಹುಬ್ಬಳ್ಳಿ** ಇವರಿಗೆ ಮಾಹಿತಿಗಾಗಿ ಕಳುಹಿಸುತ್ತಾ, ಸದರಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿದ ನಂತರ ನಿವೇಶಗಳನ್ನು ನೋಂದಣಿ ಮಾಡತಕ್ಕದ್ದು ಎಂದು ತಿಳಿಸಿದೆ.

3) ಅರ್ಜಿದಾರರಾದ **ಶ್ರೀಮತಿ ತಸ್ನೀಮ ಸಮ್ಸಿ ಕೋಂ ಮಹಮ್ಮದ ಇಸ್ಮಾಯಿಲ್ ಸಮ್ಸಿ ಹಾಗೂ ಇತರರು, 1ನೇ ಮಹಡಿ, ಸೆಂಟ್ರಲ್ ಬಿಲ್ಡಿಂಗ್, ವಿದ್ಯಾನಗರ, ಹುಬ್ಬಳ್ಳಿ** ಇವರ ಮಾಹಿತಿಗಾಗಿ ವಿನ್ಯಾಸದಲ್ಲಿ **ಉದ್ಯಾನವನ ಮತ್ತು ರಸ್ತೆಗಾಗಿ** ನಿಗಧಿಪಡಿಸಿರುವ ಜಾಗೆಗಳನ್ನು ಅಭಿವೃದ್ಧಿಪಡಿಸಿ, ಯಾವ ಪರಿಹಾರ ಕೋರದೆ ಪುಕ್ಕಟೆಯಾಗಿ ಪರಿತ್ಯಜನಾ ಪತ್ರದ ಮೂಲಕ **ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ** ಇವರ ಹೆಸರಿಗೆ ಹಾಗೂ ಸದರಿ ವಿನ್ಯಾಸದಲ್ಲಿ **ನಾಗರೀಕ ಸೌಲಭ್ಯಕ್ಕಾಗಿ** ಮೀಸಲಿಟ್ಟ ಜಾಗೆಯನ್ನು **ಆಯುಕ್ತರು, ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ** ಇವರ ಹೆಸರಿಗೆ ಯಾವುದೇ ಪರಿಹಾರ ಕೋರದೆ ಪುಕ್ಕಟೆಯಾಗಿ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸಿಕೊಡತಕ್ಕದ್ದು.

4) **ಕಾರ್ಯನಿರ್ವಾಹಕ ಅಭಿಯಂತರರು, ಹೆಸ್ಕಾಂ ಕಂಪನಿ, ಹುಬ್ಬಳ್ಳಿ** ಇವರಿಗೆ ಕಳುಹಿಸುತ್ತಾ ಸದರಿ ವಿನ್ಯಾಸದಲ್ಲಿಯ ವಿದ್ಯುತ್ತೀಕರಣ ಕಾಮಗಾರಿಗಳ ಅಂದಾಜು ಪತ್ರಿಕೆ ತಯಾರಿಸಿ ಅದಕ್ಕೆ ತಗಲುವ ಮೇಲ್ವಿಚಾರಣಾ ಶುಲ್ಕಗಳನ್ನು ಭರಿಸಿಕೊಂಡು ತಮ್ಮ ಮೇಲ್ವಿಚಾರಣೆಯಲ್ಲಿ ಕೈಗೊಂಡು, ವಿದ್ಯುತ್ತೀಕರಣ ಕಾಮಗಾರಿಗಳಿಗೆ ಮುಕ್ತಾಯ ಪ್ರಮಾಣ ಪತ್ರ ನೀಡಲು ಸೂಚಿಸಲಾಗಿದೆ.

5) **ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ, ಹುಬ್ಬಳ್ಳಿ** ಇವರಿಗೆ ಸಲ್ಲಿಸಿತ್ತಾ ಸದರಿ ವಿನ್ಯಾಸದಲ್ಲಿಯ ನೀರು ಸರಬರಾಜು ಹಾಗೂ ಒಳಚರಂಡಿ ಕಾಮಗಾರಿಗಳ ಅಂದಾಜು ಪತ್ರಿಕೆಗಳನ್ನು ತಯಾರಿಸಿಕೊಂಡು ಕಾಮಗಾರಿಗಳನ್ನು ತಮ್ಮ ಮೇಲ್ವಿಚಾರಣೆಯಲ್ಲಿ ಕೈಕೊಂಡು ಮುಕ್ತಾಯ ಪ್ರಮಾಣ ಪತ್ರ ನೀಡಲು ಸೂಚಿಸಲಾಗಿದೆ.

6) **ಕಾರ್ಯನಿರ್ವಾಹಕ ಅಭಿಯಂತರರು, ಅಭಿವೃದ್ಧಿ ವಿಭಾಗ, ಹು.ಧಾ.ನ.ಪ್ರಾ, ಹುಬ್ಬಳ್ಳಿ** ಇವರಿಗೆ ಕಳುಹಿಸುತ್ತಾ ಸದರಿ ವಿನ್ಯಾಸದಲ್ಲಿಯ ಅಭಿವೃದ್ಧಿ ಕಾಮಗಾರಿಗಳ ಅಂದಾಜು ಪತ್ರಿಕೆಗಳನ್ನು ತಯಾರಿಸಿಕೊಂಡು ವ್ಯತ್ಯಾಸದ ಮೇಲ್ವಿಚಾರಣಾ ಶುಲ್ಕವನ್ನು ಭರಿಸಿಕೊಂಡು ತಮ್ಮ ಮೇಲ್ವಿಚಾರಣೆಯಲ್ಲಿ ವಿನ್ಯಾಸವನ್ನು 2 ವರ್ಷದೊಳಗಾಗಿ ವಿನ್ಯಾಸದ ಮಾಲೀಕರಿಂದ ಅಭಿವೃದ್ಧಿ ಪಡಿಸಿಕೊಂಡು ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳಿಗೆ ಮುಕ್ತಾಯ ಪ್ರಮಾಣ ಪತ್ರ ನೀಡುವ ಪೂರ್ವದಲ್ಲಿ ವಿನ್ಯಾಸದ ನಕ್ಷೆಗೆ ಯೋಜನಾ ವಿಭಾಗದಿಂದ ಅಂತಿಮ ಅನುಮೋದನೆ ಪಡೆಯಲು ಸೂಚಿಸಲಾಗಿದೆ.

ಆಯುಕ್ತರು
ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ
ಹುಬ್ಬಳ್ಳಿ